# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 586 |
| ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 11.03.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು; | • ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಗಳನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R (12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು 1994 ರ ನಿಯಮ 43-A ರಂತೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಗೆ ದಂಡ ವಿಧಿಸಿ ವಸೂಲು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಮರಳು ಹಾಗೂ ಇತರೆ ಉಪಖನಿಜ ಸಾಗಾಣಿಕೆ ವಾಹನಗಳ ಚಲನವಲನಗಳ ಮೇಲೆ ನಿಗಾವಹಿಸಲು ಕೇಂದ್ರೀಕೃತ One state One GPS ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ. |

. . . 2

| | | |
|---|---|---|
| | | • ಅದರಂತೆ, ರಾಜ್ಯದಲ್ಲಿ ಕಳೆದ 02 ವರ್ಷಗಳಲ್ಲಿ ಅನಧಿಕೃತ ಗಣಿಗಾರಿಕೆ ಚಟುವಟಿಕೆಗಳಡಿ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಯಿಂದ ಒಟ್ಟು 6755 ಪ್ರಕರಣಗಳನ್ನು ಪತ್ತೆ ಹಚ್ಚಿ, ₹1877.63 ಲಕ್ಷಗಳ ದಂಡವನ್ನು ಸಂಗ್ರಹಿಸಲಾಗಿರುತ್ತದೆ ಹಾಗೂ 1846 ಮೊಕದ್ದಮೆಗಳನ್ನು ಸಂಬಂಧಪಟ್ಟ ನ್ಯಾಯಾಲಯ / ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿರುತ್ತದೆ. |
| ಆ) | ಅಕ್ರಮ ಮರಳು ದಂಧೆಯಿಂದ ರಾಜ್ಯದ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | • ರಾಜ್ಯದಲ್ಲಿ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿರುವ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ನೀಡಿರುವುದಿಲ್ಲ.<br>• ಅರಣ್ಯೇತರ ನದಿ ಪಾತ್ರಗಳ ಪ್ರದೇಶಗಳಲ್ಲಿ ಮರಳು ಬ್ಲಾಕ್ ಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಗುರುತಿಸಿ ಸದರಿ ಮರಳು ಬ್ಲಾಕ್ ಗಳಿಗೆ ಗುತ್ತಿಗೆ / ಕಾರ್ಯಾದೇಶವನ್ನು ಮಂಜೂರು ಮಾಡುವ ಪೂರ್ವದಲ್ಲಿ ನಿಯಮಾನುಸಾರ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆ/ ಕಾರ್ಯದೇಶಗಳನ್ನು ಮಂಜೂರು ಮಾಡಲಾಗುತ್ತಿದೆ.<br>• ಜಿಲ್ಲೆಗಳ ನದಿ ಪಾತ್ರಗಳಲ್ಲಿ ಅಕ್ರಮ ಗಣಿಗಾರಿಕೆಯಿಂದ ನದಿಪಾತ್ರಗಳು ಬರಡಾಗುತ್ತಿರುವ ಬಗ್ಗೆ ಯಾವುದೇ ವರದಿಗಳು ಸ್ವೀಕೃತವಾಗಿರುವುದಿಲ್ಲ. ಮುಂದುವರೆದು, ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ಉಪ ಪ್ರಶ್ನೆ (ಅ) ರಲ್ಲಿ ಉತ್ತರಿಸಿರುವಂತೆ ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗಿರುತ್ತದೆ. |
| ಇ) | ಅಕ್ರಮ ಮರಳು ದಂಧೆಯಿಂದ ರಾಜ್ಯ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇ? | • ಪ್ರಸ್ತುತ, ಜಿಲ್ಲಾ ವ್ಯಾಪ್ತಿಯ ನದಿ ಪಾತ್ರಗಳಲ್ಲಿ ಸರ್ಕಾರಿ ಕಾಮಗಾರಿಗಳಿಗೆ 18, ಟೆಂಡರ್-ಕಂ-ಹರಾಜು ಮೂಲಕ 31, ಹಟ್ಟಿ ಚಿನ್ನದ ಗಣಿ ಕಂಪನಿ ಲಿಮಿಟೆಡ್ ನಿಯಮಿತಕ್ಕೆ 17 ಹಾಗೂ ಪಟ್ಟಾ ಜಮೀನಿನಲ್ಲಿ 140 ಮರಳು ಗುತ್ತಿಗೆ/ ಲೈಸನ್ಸ್ / ಕಾರ್ಯಾದೇಶಗಳನ್ನು ಮಂಜೂರು ಮಾಡಲಾಗಿರುತ್ತದೆ. ಆದಾಗ್ಯೂ, ಸದರಿ ಪ್ರದೇಶಗಳನ್ನು ಹೊರತುಪಡಿಸಿ, ಜಿಲ್ಲೆಗಳ ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಅಲ್ಲಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>• ಉಪ ಪ್ರಶ್ನೆ (ಅ) ರಲ್ಲಿ ಉಲ್ಲೇಖಿಸಿರುವಂತೆ ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/72/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.